ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

10, 15, 20 ಮತ್ತು 25 ವರ್ಷಗಳ ಕಾಲಮಿತಿ ಬಡ್ತಿ ಮಂಜೂರು ಮಾಡುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-

76 (32) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ, ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರು/ಉಪನ್ಯಾಸಕರುಗಳಿಗಿಂತ ಬಡ್ತಿ ಪಡೆಯದ ಶಿಕ್ಷಕರು/ಉಪನ್ಯಾಸಕರ ವೇತನ ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ;

(ಆ) ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ, ಪ್ರೌಢಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರ/ಉಪನ್ಯಾಸಕರಿಗೆ 6ನೇ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಬಡ್ತಿ ಪಡೆಯದೇ ಇರುವ ಶಿಕ್ಷಕರು/ಉಪನ್ಯಾಸಕರಿಗೆ ಕಡಿಮೆ ಇಲ್ಲದಂತೆ ವೇತನ ನಿಗದಿಗೊಳಿಸುವಂತೆ ವರದಿ ಮಾಡಿದ್ದು, ಸದರಿ ವರದಿಯನ್ವಯ 10, 15, 20 ಮತ್ತು 25 ವರ್ಷಗಳ ಕಾಲಮಿತಿ ಬಡ್ತಿ ಮಂಜೂರು ಮಾಡಲು ಸರ್ಕಾರವು ಚಿಂತನೆ ನಡೆಸಿದೆಯೇ ; ನಡೆಸಿದ್ದಲ್ಲಿ, ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?